ಆ) ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಸ್ಥಳೀಯ ಅಗತ್ಯತೆಗನುಗುಣವಾಗಿ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗುವುದು.

ಪದವಿ ಪೂರ್ವ ಕಾಲೇಜುಗಳ ಮಂಜೂರಾತಿ

91(237): ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಡಾ॥ ಡಿ.ಎಂ.ನಂಜುಂಡಪ್ಪ ವರದಿ ಅನ್ವಯ ಕೊಪ್ಪಳ ಲ್ಲೂಕುಅತೀ ಹಿಂದುಳಿದ ಶೈಕ್ಷಣಿಕ ಪ್ರದೇಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸದರಿ ತಾಲ್ಲೂಕನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸಲು ಹಾಕಿಕೊಂಡಿರುವ ರೂಪುರೇಶೆಗಳೇನು?

ಆ) ಕೊಪ್ಪಳ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಗಣೆಗೇರಾ, ಬೆಟಗೇರಿ, ಹಾಗೂ ಕವಲೂರು ಗ್ರಾಮಗಳ ವ್ಯಾಪ್ತಿಯಲ್ಲಿ ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಮತ್ತು ಓಜನಹಳ್ಳಿ, ಹಾಲವಾಗಿಲು, ಅಳವಂಡಿ ಹಟ್ಟಿ, ಚಿಲವಾಡಗಿ ಹಾಗೂ ಕುಣಿಕೇರಿ ಗ್ರಾಮಗಳಲ್ಲಿ ಹೊಸ ಸರ್ಕಾರಿ ಪ್ರೌಢ ಶಾಲೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಈ) ಸದರಿ ಗ್ರಾಮಗಳ ವ್ಯಾಪ್ತಿಯಲ್ಲಿ ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ಪ್ರೌಢಶಾಲೆಗಳನ್ನು ಮಂಜೂರು ಮಾಡಿದರೆ ಈ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ಸಹಕಾರಿಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಉ) ಹಾಗಿದ್ದಲ್ಲಿ, ಈ ತೊಂದರೆಯನ್ನು ನಿವಾರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಬಂದಿದೆ. ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿ 2010–11ನೇ ಸಾಲಿಗೆ 77 ಹೆಚ್ಚುವರಿ ಕೊಠಡಿಗಳು, 95 ಹೆಣ್ಣುಮಕ್ಕಳ ಶೌಚಾಲಯ, 32 ಶಾಲೆಗಳಿಗೆ ವಿದ್ಯುತ್ ಕಲ್ಪಿಸಲು ಮಂಜೂರಾಗಿರುತ್ತದೆ. ಕಾಮಗಾರಿಗಳು ವಿವಿಧ ಹಂತದಲ್ಲಿರುತ್ತದೆ. ಸದರಿ ತಾಲ್ಲೂಕಿನ ಸರ್ಕಾರಿ ಪ್ರೌಢಶಾಲೆಗೆ ಆರ್‌ಐಡಿಎಫ್ 14ರಡಿ 4 ಕೊಠಡಿಗಳನ್ನು ಮಂಜೂರು ಮಾಡಿದ್ದು, ಕಾಮಗಾರಿಯು ರೂಫ್ ಲೆವೆಲ್ ಹಂತದಲ್ಲಿರುತ್ತದೆ.

ಆ) ಬಂದಿದೆ.

ಇ) ಈಗಾಗಲೇ ಮಂಜೂರಾಗಿ ನಡೆಯುತ್ತಿರುವ ಹೊಸ ಸರ್ಕಾರಿ ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಮೂಲಭೂತ ಸೌಲಭ್ಯ ಒದಗಿಸುವವರೆಗೆ ಯಾವುದೇ ಹೊಸ ಶಾಲೆ ಮತ್ತು ಕಾಲೇಜುಗಳನ್ನು ಮಂಜೂರು ಮಾಡದಿರಲು ನಿರ್ಧಾರ ತೆಗೆದುಕೊಳ್ಳಲಾಗಿದೆ.

ಈ) ಬಂದಿರುತ್ತದೆ, ಆದರೆ ಪ್ರಾರಂಭಿಸಲಾದ ಹೊಸ ಸರ್ಕಾರಿ ಪ್ರೌಢಶಾಲೆಗಳಿಗೆ ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ಮೂಲಭೂತ ಸೌಲಭ್ಯ ಒದಗಿಸುವವರೆಗೆ ಹೊಸ ಶಾಲೆ ಮತ್ತು ಕಾಲೇಜುಗಳನ್ನು ಪ್ರಾರಂಭಿಸದಿರಲು ನಿರ್ಧಾರ ತೆಗೆದುಕೊಳ್ಳಲಾಗಿದೆ. ಆದಾಗ್ಯೂ ಹಾಲಿ ಕಾರ್ಯ ನಿರ್ವಹಿಸುತ್ತಿರುವ 437 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 2010–11ನೇ ಸಾಲಿನಲ್ಲಿ ವಿಜ್ಞಾನ ಸಂಯೋಜನೆಯನ್ನು 270 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಾಣಿಜ್ಯ ಸಂಯೋಜನೆಯನ್ನು ಪ್ರಾರಂಭಿಸಲು ಅನುಮತಿ ನೀಡಿದೆ.

ಉ) ಉದ್ಭವಿಸುವುದಿಲ್ಲ.

ಪಶು ವೈದ್ಯಕೀಯ ಆಸ್ಪತ್ರೆಗಳ ಮಂಜೂರಾತಿಯ ಬಗ್ಗೆ

92(238): ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ): ಮಾನ್ಯ ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶು ಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೊಪ್ಪಳ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಕವಲೂರು, ಮುನಿರಾಬಾದ್ ಡ್ಯಾಂ, ಕಾತರಿಕಿ, ಗುಡ್ಲಾನೂರು ಹಾಗೂ ಹೊಸ ನಿಂಗಾಪುರ